## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಎನ್.ಬಸವರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿಡಘಟ್ಟ ಗ್ರಾಮ ಪಂಚಾಯಿತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ರವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ ಹೊರಡಿಸುವ ಕುರಿತು – ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/623/ಗ್ರಾಪಂಕಾ/2016, ದಿನಾಂಕ:22-12-2016.
2. ಅಪರ ನಿಬಂಧಕರು ವಿಚಾರಣೆಗಳು-09, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-2/DE/781 /2016/ARE-09, ದಿನಾಂಕ: 10-10-2018.
3. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE/781/2016/ARE-09, ದಿನಾಂಕ: 12.10.2018.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಎನ್.ಬಸವರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿಡಘಟ್ಟ ಗ್ರಾಮ ಪಂಚಾಯಿತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು-09, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ":**

"ಶ್ರೀ ಆತ್ಮಾನಂದ ಬಿನ್ ದೇವರಾಜು, ಮಾದನಾಯಕನಹಳ್ಳಿ, ಆತಗೂರು ಹೋಬಳಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ರವರ ಮನೆಗೆ ಹೋಗಲು ಬರಲು ಸುಮಾರು 40 ವರ್ಷಗಳಿಂದ ರಸ್ತೆ ಇರುತ್ತದೆಂದು, ಆದರೆ ಸದರಿ ರಸ್ತೆಯನ್ನು ಶ್ರೀ ಕೃಷ್ಣ, ಶ್ರೀ ಅಪ್ಪಾಜಿ ಮತ್ತು ಶ್ರೀ ಜಯರಾಮು ಎಂಬುವವರು ಒತ್ತುವರಿ ಮಾಡಿಕೊಂಡಿಕೊಂಡಿದ್ದು, ಸದರಿ ಸದರಿ ಒತ್ತುವರಿಯನ್ನು ತೆರವುಗೊಳಿಸುವಂತೆ ಗ್ರಾಮ ಪಂಚಾಯಿತಿಯಲ್ಲಿಯೂ ಸಹಾ ಆದೇಶಿಸಿರುತ್ತದೆ. ಸದರಿ ಆದೇಶವನ್ನು ಪ್ರಶ್ನಿಸಿ ಶ್ರೀ ಚಿಕ್ಕಪುಟ್ಟಯ್ಯ ಬಿನ್ ಮಾಹಿಗೌಡ ರವರು ತಾಲ್ಲೂಕು ಪಂಚಾಯಿತಿಯ ಅಧ್ಯಕ್ಷರ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿದ್ದು, ಸದರಿ ಮೇಲ್ಮನವಿಯು ವಜಾಗೊಂಡಿರುತ್ತದೆ. ಈ ಎಲ್ಲಾ ಸಂಗತಿಗಳನ್ನು ಶ್ರೀ ಎನ್.ಬಸವರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿಡಘಟ್ಟ ಗ್ರಾಮ ಪಂಚಾಯಿತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ಗಮನಕ್ಕೆ ತಂದರೂ ಸಹಾ ಶ್ರೀ ಎನ್.ಬಸವರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿಡಘಟ್ಟ ಗ್ರಾಮ ಪಂಚಾಯಿತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ಸದರಿ ಒತ್ತುವರಿಯನ್ನು ತೆರವುಗೊಳಿಸದೇ ಕರ್ತವ್ಯ ಲೋಪವೆಸಗಿರುತ್ತಾರೆಂದು ಸರ್ಕಾರಿ ನೌಕರನಿಗೆ ತಕ್ಕುದಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆಯಿಂದ ವರ್ತಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು (ನಡತೆ) 1966 ರ ನಿಯಮ 3(1)(ii) ಮತ್ತು (iii) ರನ್ವಯ ದುರ್ನಡತೆ ಎಸಗಿರುತ್ತಾರೆ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಎನ್.ಬಸವರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿಡಘಟ್ಟ ಗ್ರಾಮ ಪಂಚಾಯಿತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿರುವುದಿಲ್ಲವೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಉಪಲೋಕಾಯುಕ್ತರು ವಿಚಾರಣಾಧಿಕಾರಿಗಳ ವರದಿಯನ್ನು ಅಂಗೀಕರಿಸಿ ಶ್ರೀ ಎನ್.ಬಸವರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿಡಘಟ್ಟ ಗ್ರಾಮ ಪಂಚಾಯಿತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ಇವರುಗಳ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ದೋಷಮುಕ್ತರನ್ನಾಗಿಸಿ ಆದೇಶಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಅಪರ ನಿಬಂಧಕರು-09, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಶ್ರೀ ಎನ್.ಬಸವರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿಡಘಟ್ಟ ಗ್ರಾಮ ಪಂಚಾಯಿತಿ, ರವರ ವಿರುದ್ಧ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ದೋಷಮುಕ್ತರನ್ನಾಗಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/623/ಗ್ರಾಪಂಕಾ/2016,**
**ಬೆಂಗಳೂರು, ದಿನಾಂಕ: 23-11-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಎನ್.ಬಸವರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿಡಘಟ್ಟ ಗ್ರಾಮ ಪಂಚಾಯಿತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ರವರ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ದೋಷಮುಕ್ತರನ್ನಾಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

23/11
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1.ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2.ಮಾನ್ಯ ಉಪಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3.ಅಪರ ನಿಬಂಧಕರು, ವಿಚಾರಣೆಗಳು-09, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4.ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ ಜಿಲ್ಲೆ.
6.ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ
7.ಶ್ರೀ ಎನ್.ಬಸವರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿಡಘಟ್ಟ ಗ್ರಾಮ ಪಂಚಾಯಿತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ.
8.ಗಣಕ ಕೋಶ.
9.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.